ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ–571201

ಕಛೇರಿ: 08272–225500
ನಿವಾಸ: 08272–225700
ಫ್ಯಾಕ್ಸ್: 08272–225900
ಈ–ಮೇಲ್:deo.kodagu@gmail.com
ವೆಬ್ ಸೈಟ್:http://www.kodagu.nic.in

ಸಂಖ್ಯೆ:ಪ್ರವಿ/4/2018–19

ದಿನಾಂಕ: 21–08–2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಾದ್ಯಂತ ಭಾರಿ ಮಳೆಯಾಗುತ್ತಿದ್ದು, ಆಹಾರ ಮತ್ತು ಇತರೆ ಸಾಮಾಗ್ರಿಗಳನ್ನು ಸಂಗ್ರಹಣೆಗಾಗಿ ಸ್ಥಾಪಿಸಲಾಗಿರುವ ಕೊಠಡಿಗಳಲ್ಲಿ ಸಾಮಾಗ್ರಿಗಳನ್ನು ಸ್ವೀಕರಿಸಲು ಮತ್ತು ವಿತರಿಸಲು ಅಧಿಕಾರಿ/ಸಿಬ್ಬಂದಿಗಳನ್ನು ನಿಯೋಜಿಸುವ ಕುರಿತು.

ಉಲ್ಲೇಖ: ಈ ಕಚೇರಿ ಅಧಿಕೃತ ಜ್ಞಾಪನ ಸಂಖ್ಯೆ: :ಪ್ರವಿ/4/2018–19, ದಿನಾಂಕ 20.08.2018

********

ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆಯಿಂದ ಸಂತ್ರಸ್ಥರಾದವರನ್ನು ಸುರಕ್ಷಿತ ಸ್ಥಳ / ಗಂಜಿ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿರುತ್ತದೆ. ಜಿಲ್ಲೆಯಾದ್ಯಂತ ವಿವಿಧ ಭಾಗಗಳಲ್ಲಿರುವ ಸಂತ್ರಸ್ಥರಿಗೆ ಆಹಾರ ವಿತರಿಸಲು ಆಹಾರ ಸಾಮಾಗ್ರಿ ಮತ್ತು ಇನ್ನಿತರೆ ಸಾಮಾಗ್ರಿಗಳು ಸರ್ಕಾರ, ವಿವಿಧ ಸಂಘ ಸಂಸ್ಥೆ, ದಾನಿಗಳು ಮುಂತಾದವರಿಂದ ಸ್ವೀಕೃತವಾಗುತ್ತಿದ್ದು, ಇವುಗಳನ್ನು ಸ್ವೀಕರಿಸಿ, ಸಂತ್ರಸ್ಥರಿಗೆ ವಿತರಿಸುವ ಸಲುವಾಗಿ ಮಡಿಕೇರಿಯಲ್ಲಿ ದಾಸ್ತಾನು / ವಿತರಣಾ ಕೇಂದ್ರಗಳನ್ನು ತೆರೆಯಲಾಗಿದ್ದು, ಇವುಗಳಿಗೆ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಉಲ್ಲೇಖದಂತೆ ನಿಯೋಜಿಸಲಾಗಿರುತ್ತದೆ.

ಉಲ್ಲೇಖದ ಆದೇಶವನ್ನು ಮುಂದುವರೆಸುತ್ತಾ, ಪ್ರಸ್ತುತ ಸೋಮವಾರಪೇಟೆ ತಾಲ್ಲೂಕಿನ ಕುಶಾಲನಗರ ಮತ್ತು ವಿರಾಜಪೇಟೆ ತಾಲ್ಲೂಕಿನ ಪೊನ್ನಂಪೇಟೆಯಲ್ಲಿ ಹೆಚ್ಚುವರಿಯಾಗಿ ತಲಾ ಒಂದು ದಾಸ್ತಾನು / ವಿತರಣಾ ಕೇಂದ್ರಗಳನ್ನು ತೆರೆಯಾಗಿದ್ದು, ಈ ಕೇಂದ್ರಗಳಿಗೆ **"ಅನುಬಂಧ–ಅ"** ದಲ್ಲಿ ನಮೂದಿಸಿದಂತೆ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜಿಸಿದೆ.

ದಾಸ್ತಾನು ಕೇಂದ್ರಗಳಿಗೆ ನೇಮಿಸಲಾಗಿರುವ ಅಧಿಕಾರಿ / ಸಿಬ್ಬಂದಿಗಳು ತಮಗೆ ನಿಯೋಜಿಸಿರುವ ದಾಸ್ತಾನು ಕೇಂದ್ರಗಳಿಗೆ ಬರುವ ಆಹಾರ ಮತ್ತು ಇತರೆ ಸಾಮಾಗ್ರಿಗಳನ್ನು ಸ್ವೀಕರಿಸಿ ದಾಸ್ತಾನು ವಹಿಯಲ್ಲಿ ನಮೂದಿಸಿಕೊಂಡು, ಸಂಬಂಧಪಟ್ಟ ತಹಶೀಲ್ದಾರ್ ಹಾಗೂ ತಾಲ್ಲೂಕು ಪಂಚಾಯತಿನ ಕಾರ್ಯನಿರ್ವಹಣಾಧಿಕಾರಿಗಳ ಸಮನ್ವಯದೊಂದಿಗೆ ಅಗತ್ಯಕ್ಕೆ ಅನುಗುಣವಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅಥವಾ ಗ್ರಾಮ ಲೆಕ್ಕಿಗರ ಮೂಲಕ ಗ್ರಾಮಗಳಿಗೆ ಹಂಚಿಕೆ ಮಾಡುವುದು. ವಿತರಣೆ ಮಾಡಿದ ಸಾಮಾಗ್ರಿಗಳ ಬಗ್ಗೆ ಸಹ ದಾಸ್ತಾನು ವಹಿಯಲ್ಲಿ ದಾಖಲಿಸಿ ಪ್ರತಿ ದಿನ ವರದಿಯನ್ನು ನಿಗಧಿತ ನಮೂನೆಯಲ್ಲಿ ಜಿಲ್ಲಾ ಸಮನ್ವಯಾಧಿಕಾರಿಗಳಿಗೆ ಸಲ್ಲಿಸುವುದು. ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದಂತೆ ಕಾರ್ಯ ನಿರ್ವಹಿಸಲು ಆದೇಶಿಸಿದೆ.

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ

ಪ್ರತಿಯನ್ನು: ಸಂಬಂಧಪಟ್ಟ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಸೂಕ್ತ ಕ್ರಮಕ್ಕಾಗಿ